ಕರ್ನಾಟಕ ವಿಧಾನಸಭೆ

KARNATAKA LEGISLATIVE ASSEMBLY

ಸಂಖ್ಯೆ:ಕವಿಸಸ/ಶಾರಶಾ/18/2018

ವಿಧಾನಸಭೆ ಸಚಿವಾಲಯ,
ವಿಧಾನ ಸೌಧ, ಬೆಂಗಳೂರು
ದಿನಾಂಕ:18.05.2018

ಮಾನ್ಯರೆ,

ವಿಷಯ: ಕರ್ನಾಟಕ ವಿಧಾನಸಭೆಯ ಅಧಿವೇಶನದ ದಿನಾಂಕ ಮತ್ತು ಸಮಯದ ಬಗ್ಗೆ.

******

ಕರ್ನಾಟಕದ ಮಾನ್ಯ ರಾಜ್ಯಪಾಲರು ಭಾರತ ಸಂವಿಧಾನದ ಅನುಚ್ಛೇದ 174(1)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಉಪಯೋಗಿಸಿ, ಕರ್ನಾಟಕ ವಿಧಾನಸಭೆಯು ಶನಿವಾರ, **ದಿನಾಂಕ 19ನೇ ಮೇ, 2018 ರಂದು ಬೆಳಿಗ್ಗೆ 11.00 ಗಂಟೆಗೆ ಬೆಂಗಳೂರಿನ ವಿಧಾನ ಸೌಧದಲ್ಲಿರುವ "ವಿಧಾನ ಸಭೆಯ ಸಭಾಂಗಣದಲ್ಲಿ"** ಸೇರಲು ಆದೇಶಿಸಿರುತ್ತಾರೆಂದು ತಮಗೆ ತಿಳಿಸಲಿಚ್ಛಿಸುತ್ತೇನೆ.

ಆದುದರಿಂದ, ಸದರಿ ಸಭೆಗೆ ತಾವು ಹಾಜರಾಗಬೇಕೆಂದು ಕೋರುತ್ತೇನೆ.

ತಮ್ಮ ವಿಶ್ವಾಸಿ,
(ಎಸ್. ಮೂರ್ತಿ)
ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ.

ಗೆ:

1. ವಿಧಾನಸಭೆಯ ಎಲ್ಲಾ ಮಾನ್ಯ ಸದಸ್ಯರಿಗೆ.
2. ದಿನಾಂಕ 18ನೇ ಮೇ, 2018ರ ರಾಜ್ಯ ವಿಶೇಷ ಪತ್ರಾಂಕಿತದಲ್ಲಿ ಪ್ರಕಟಿಸಿ ಈ ಸಚಿವಾಲಯಕ್ಕೆ 50 ಪ್ರತಿಗಳನ್ನು ಕಳುಹಿಸಿಕೊಡುವಂತೆ ಕರ್ನಾಟಕ ರಾಜ್ಯದ ಪತ್ರಾಂಕಿತ ಸಂಗ್ರಹಕಾರರನ್ನು ಕೋರಲಾಗಿದೆ.

ಪ್ರತಿಗಳು:

1. ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ, ಅಪರ ಮುಖ್ಯ ಕಾರ್ಯದರ್ಶಿಯವರಿಗೆ
2. ಎಲ್ಲಾ ಇಲಾಖಾ ಪ್ರಧಾನ ಕಾರ್ಯದರ್ಶಿಗಳಿಗೆ/ ಕಾರ್ಯದರ್ಶಿಗಳಿಗೆ, ಬೆಂಗಳೂರು.
3. ಭಾರತ ಸರ್ಕಾರದ ಕಾನೂನು ಇಲಾಖೆಯ ಕಾರ್ಯದರ್ಶಿಯವರಿಗೆ, ನವದೆಹಲಿ.
4. ಭಾರತ ಸರ್ಕಾರದ ಸಂಸದೀಯ ವ್ಯವಹಾರಗಳ ಇಲಾಖೆಯ ಕಾರ್ಯದರ್ಶಿಯವರಿಗೆ, ನವದೆಹಲಿ.
5. ಭಾರತ ಸರ್ಕಾರದ ಗೃಹ ಇಲಾಖೆಯ ಕಾರ್ಯದರ್ಶಿಯವರಿಗೆ, ನವದೆಹಲಿ.
6. ಮಾನ್ಯ ರಾಜ್ಯಪಾಲರ ಕಾರ್ಯದರ್ಶಿಯವರಿಗೆ, ರಾಜಭವನ, ಬೆಂಗಳೂರು.
7. ಮಹಾ ಪ್ರಧಾನ ಕಾರ್ಯದರ್ಶಿ, ಲೋಕಸಭೆ, ನವದೆಹಲಿ.
8. ಮಹಾ ಪ್ರಧಾನ ಕಾರ್ಯದರ್ಶಿ, ರಾಜ್ಯಸಭೆ, ನವದೆಹಲಿ.
9. ಕಾರ್ಯದರ್ಶಿ, ಭಾರತ ಚುನಾವಣಾ ಆಯೋಗ, ನವದೆಹಲಿ.
10. ಸ್ಥಾನಿಕ ಆಯುಕ್ತರು, ಕರ್ನಾಟಕ ಭವನ, ನವದೆಹಲಿ.
11. ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು, ಬೆಂಗಳೂರು.
12. ಅಡ್ವೋಕೇಟ್ ಜನರಲ್, ಕರ್ನಾಟಕ, ಬೆಂಗಳೂರು.
13. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
14. ಎಲ್ಲಾ ರಾಜ್ಯ ವಿಧಾನಮಂಡಲಗಳ ಕಾರ್ಯದರ್ಶಿಗಳಿಗೆ.
15. ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು.
16. ನಿರ್ದೇಶಕರು, ದೂರದರ್ಶನ ಕೇಂದ್ರ, ಬೆಂಗಳೂರು.
17. ನಿರ್ದೇಶಕರು, ಆಕಾಶವಾಣಿ, ಬೆಂಗಳೂರು.
18. ನಿರ್ದೇಶಕರು, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ಇಲಾಖೆ, ಬೆಂಗಳೂರು.
19. ಕರ್ನಾಟಕ ವಿಧಾನ ಸಭೆಯ ಎಲ್ಲಾ ಅಧಿಕಾರಿಗಳು ಹಾಗೂ ಶಾಖೆಗಳಿಗೆ – **ಮಾಹಿತಿಗಾಗಿ.**

****